ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಕನ್ನಡ ಕಾಯಕ ವರ್ಷ

ಸಂಖ್ಯೆ: ಕವಿಪ್ರನಿನಿ/ಬಿ14/68417/2017-18 ದಿನಾಂಕ 5 JUL 2021

## :ಸುತ್ತೋಲೆ:

ವಿಷಯ: ಹೊರಗುತ್ತಿಗೆ ಕಾರ್ಮಿಕರಿಗೆ ಸಂಬಂಧಿಸಿದಂತೆ, ಗೌರವಾನ್ವಿತ ಲೋಕಾಯುಕ್ತರವರು ದಿನಾಂಕ: 22.01.2021 ರಂದು ನೀಡಿರುವ ನಿರ್ದೇಶನಗಳನ್ನು ಪಾಲಿಸುವ ಬಗ್ಗೆ.

ಉಲ್ಲೇಖ:
1. ಆಯುಕ್ತರು, ಕಾರ್ಮಿಕ ಇಲಾಖೆ, ಬೆಂಗಳೂರು ರವರ ದಿನಾಂಕ: 17.02.2021ರ ಪತ್ರ ಸಂಖ್ಯೆ: ಕವೇಕಾ-2/ಇತರೆ-85/ಕ.ಲೋ/2018-19.
2. ಗೌರವಾನ್ವಿತ ಕರ್ನಾಟಕ ಲೋಕಾಯುಕ್ತ ರವರ ಆದೇಶ ದಿನಾಂಕ: 22.01.2021.
3. ಉಪ ಪ್ರಧಾನ ವ್ಯವಸ್ಥಾಪಕರು(ತಾಂತ್ರಿಕ), ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಕವಿಪ್ರನಿನಿ/ಮುಔಬಾ/ಬಿ14/6014/2002-03, ದಿನಾಂಕ: 16.05.2020.
4. ಹೊರಗುತ್ತಿಗೆ ಕೆಲಸಗಾರರಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಕನಿಷ್ಠ ವೇತನವನ್ನು ಪಾವತಿಸುವ ಬಗ್ಗೆ ದಿನಾಂಕ: 26.04.2019 ಮತ್ತು 11.05.2020 ರಂದು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ14/526/2019-20.
5. ನಿಗಮ ಕಚೇರಿ ದಿನಾಂಕ: 22.12.2018ರ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ14/15923/2017-18.
6. ನಿಗಮ ಕಚೇರಿ ದಿನಾಂಕ: 23.01.2019ರ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ14/6014/2002-03 ಮತ್ತು ದಿನಾಂಕ: 06.03.2020ರ ತಿದ್ದುಪಡಿ ಆದೇಶ.

********

ಕವಿಪ್ರನಿನಿ ವ್ಯಾಪ್ತಿಯಲ್ಲಿನ ವಿವಿಧ ಕಚೇರಿ ಹಾಗೂ ವಿದ್ಯುತ್ ಉಪಕೇಂದ್ರಗಳನ್ನು ನಿರ್ವಹಿಸಲು ವಿವಿಧ ಸೇವೆಗಳನ್ನು ನಿರ್ದಿಷ್ಟ ಕೆಲಸಕ್ಕೆ/ನಿರ್ದಿಷ್ಟ ಅವಧಿಗೆ ಕೆ.ಟಿ.ಪಿ.ಪಿ ಕಾಯ್ದೆಯನ್ವಯ ಟೆಂಡರ್ ಪ್ರಕ್ರಿಯೆಗೊಳಪಡಿಸಿ ಕನಿಷ್ಠ ವೇತನ ಹಾಗೂ ಇತರೆ ಶಾಸನಬದ್ಧ ಮೊತ್ತಗಳನ್ನು ಪಾವತಿಸುವ ಷರತ್ತಿಗೊಳಪಟ್ಟು ಹೊರಗಿನ ಏಜೆನ್ಸಿಗಳಿಂದ ಪಡೆಯಲಾಗುತ್ತಿರುತ್ತದೆ. ಹೊರಗಿನ ಏಜೆನ್ಸಿ ಮೂಲಕ ಗೊತ್ತುಪಡಿಸಿಕೊಳ್ಳಲಾದ ಕಾರ್ಮಿಕರುಗಳಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ತಿಳಿಸುವ ಕನಿಷ್ಠ ವೇತನ ಹಾಗೂ ಇದರೊಂದಿಗೆ ಶಾಸನಬದ್ಧ ಪಾವತಿಗಳಾದ ಇ.ಪಿ.ಎಫ್, ಇ.ಎಸ್.ಐ ಮತ್ತು ಇತರೆ ಸೌಲಭ್ಯಗಳನ್ನು ಪಾವತಿಸುವುದು ಕಡ್ಡಾಯವಾಗಿರುತ್ತದೆ.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕನಿಷ್ಠ ವೇತನ, ಇ.ಎಸ್.ಐ, ಪಿಎಫ್ ಸೌಲಭ್ಯಗಳು ನಿಯಮಿತವಾಗಿ ಪಾವತಿಯಾಗದಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ನ್ಯೂನತೆಗಳನ್ನು ಸರಿಪಡಿಸಿಕೊಳ್ಳಲು ಗೌರವಾನ್ವಿತ ಕರ್ನಾಟಕ ಲೋಕಾಯುಕ್ತರು ರವರು ದಿನಾಂಕ: 22.01.2021 ರಂದು ಆದೇಶ ಹೊರಡಿಸಿದ್ದು, ಸದರಿ ಅದೇಶದಲ್ಲಿ ಗೌರವಾನ್ವಿತ ಲೋಕಾಯುಕ್ತರು ನೀಡಿರುವ ನಿರ್ದೇಶನಗಳನ್ನು ಪಾಲಿಸುವಂತೆ ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆ, ಬೆಂಗಳೂರು ರವರು ಉಲ್ಲೇಖಿತ ಪತ್ರ-1ರಲ್ಲಿ ಸೂಚಿಸಿರುತ್ತಾರೆ.

ಕವಿಪ್ರನಿನಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ಕೆಲಸಗಾರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸಿರುವ ಕನಿಷ್ಠ ವೇತನ, ಇ.ಪಿ.ಎಫ್, ಇ.ಎಸ್.ಐನ್ನು ಪಾವತಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಉಲ್ಲೇಖಿತ ಪತ್ರ-5 ಮತ್ತು 6ರ ಸುತ್ತೋಲೆಗಳಲ್ಲಿ ತಿಳಿಸಲಾಗಿರುತ್ತದೆ ಮತ್ತು ಕಾರ್ಮಿಕ ಇಲಾಖೆಯು ಪ್ರತಿ ವರ್ಷ ಬೆಲೆ ಸೂಚ್ಯಂಕವನ್ನು ಹೆಚ್ಚಿಸಿದಂತೆ, ಸದರಿ ಹೆಚ್ಚುವರಿ ಸೂಚ್ಯಂಕಕ್ಕೆ ಪಾವತಿಸಬೇಕಾದ ವೇತನದ ಬಗ್ಗೆ ನಿಗಮದಿಂದ ಉಲ್ಲೇಖಿತ-4ರಲ್ಲಿ ಸುತ್ತೋಲೆಗಳನ್ನು ಹೊರಡಿಸಲಾಗುತ್ತಿರುತ್ತದೆ.

ಪ್ರಸ್ತುತ ಗೌರವಾನ್ವಿತ ಲೋಕಾಯುಕ್ತರು ರವರು ದಿನಾಂಕ: 22.01.2021 ರಂದು ಹೊರಡಿಸಿರುವ ಆದೇಶದ ಪ್ರತಿಯಲ್ಲಿ ಈ ಕೆಳಕಂಡ ಅಂಶಗಳನ್ನು ಪಾಲಿಸುವಂತೆ ನಿರ್ದೇಶಿಸಿರುವುದರಿಂದ ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಲಾಗಿದೆ.

1. ಹೊರಗುತ್ತಿಗೆ ಕೆಲಸಗಾರರ ಸೇವೆಗಳನ್ನು ಒದಗಿಸುತ್ತಿರುವ ಹೊರಗಿನ ಏಜೆನ್ಸಿಗಳ ವಿವರಗಳನ್ನು ಶಾಶ್ವತವಾಗಿ ಇರಿಸಲು ತಿಳಿಸಲಾಗಿದೆ(ವರ್ಷಾವರು).
2. ಹೊರಗುತ್ತಿಗೆ ಕೆಲಸಗಾರರಿಗೆ ಹೊರಗಿನ ಏಜೆನ್ಸಿ ರವರು ಕನಿಷ್ಠ ವೇತನ ಪಾವತಿಸುತ್ತಿರುವ ಬಗ್ಗೆ ಹಾಗೂ ಇ.ಪಿ.ಎಫ್, ಇ.ಎಸ್.ಐ ವಂತಿಗಳನ್ನು ಕಟ್ಟಾವು ಮಾಡಿ ಸಂಬಂಧಪಟ್ಟ ಇಲಾಖೆಗೆ ಪಾವತಿಸುತ್ತಿರುವ ಬಗ್ಗೆ ಪರಿಶೀಲಿಸುವುದು.
3. ಹೊರಗಿನ ಏಜೆನ್ಸಿಗಳ ಬಿಲ್ಲುಗಳನ್ನು ಪಾಸ್ ಮಾಡುವಾಗ ಈಗಾಗಲೇ ನಿಗಮದಿಂದ ಉಲ್ಲೇಖ 5 ಮತ್ತು 6ರ ಸುತ್ತೋಲೆಗಳಲ್ಲಿ ತಿಳಿಸಿರುವ ಅಂಶಗಳನ್ನು ಕಡ್ಡಾಯವಾಗಿ ಪಾಲಿಸಲು ತಿಳಿಸಲಾಗಿದೆ.
4. ನಿಗಮದ ಟೆಂಡರ್ ನಿಯಮಗಳನ್ನು ಪಾಲಿಸದ ಹಾಗೂ ಹೊರಗುತ್ತಿಗೆ ಕೆಲಸಗಾರರಿಗೆ ವೇತನ, ಇ.ಪಿ.ಎಫ್ ಹಾಗೂ ಇ.ಎಸ್.ಐ ನ್ನು ನಿಗದಿತ ಸಮಯದಲ್ಲಿ ಪಾವತಿಸದ ಹೊರಗಿನ ಏಜೆನ್ಸಿಗಳನ್ನು ಅನರ್ಹಗೊಳಿಸಿ ಕಪ್ಪು ಪಟ್ಟಿಗೆ ಸೇರಿಸತಕ್ಕದ್ದು ಮತ್ತು ಈ ಮಾಹಿತಿಯನ್ನು ಸ್ಥಳೀಯ ಸಹಾಯಕ ಕಾರ್ಮಿಕ ಆಯುಕ್ತರು, ಕಾರ್ಮಿಕ ಇಲಾಖೆಗೆ ಮಾಹಿತಿಯನ್ನು ನೀಡುವುದು.

{ಮಾನ್ಯ ವ್ಯವಸ್ಥಾಪಕ ನಿರ್ದೇಶಕರು,
ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿದೆ}

ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),
ಕವಿಪ್ರನಿನಿ.

**ಪ್ರತಿಯನ್ನು:**

1. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
3. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ನಿಗಮ ಕಾರ್ಯಾಲಯ, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ**

1. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕವಿಪ್ರನಿನಿ.
2. ಎಲ್ಲಾ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ.
3. ಎಲ್ಲಾ ಉಪಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿಗಳು, ಕವಿಪ್ರನಿನಿ.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ:659), ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.